(ಗೊಂದಲ)

ಅಧ್ಯಕ್ಷರು: ಮಾನ್ಯ ಸುರೇಶ್ ಗೌಡರನ್ನು ಕರೆದಿದ್ದೇನೆ. ನಿಮ್ಮ ಹಕ್ಕುಚ್ಯುತಿ ಪ್ರಸ್ತಾವವನ್ನು ಈಗ ರೈಸ್ ಮಾಡಿ.

4. ಹಕ್ಕುಚ್ಯುತಿ ಮಂಡನೆ:

(ಗೊಂದಲ)

ವಿಷಯ: ಶ್ರೀ ಹೆಚ್.ಡಿ.ಕುಮಾರಸ್ವಾಮಿ, ಲೋಕಸಭಾ ಸದಸ್ಯರು ಹಾಗೂ ಮಾಜಿ ಮುಖ್ಯಮಂತ್ರಿಗಳು ಇವರು ಶಾಸನ ಸಭೆಯ ಬಗ್ಗೆ ಅವಹೇಳನಕಾರಿ ಮಾತುಗಳನ್ನಾಡಿ ವಿಧಾನ ಸಬೆಯ ಘನತೆಗೆ ಚ್ಯುತಿ ತಂದಿರುವ ಕುರಿತು.

ಶ್ರೀ ಸುರೇಶ್ ಗೌಡ: (ತುಮಕೂರು ಗ್ರಾಮಾಂತರ) ಮಾನ್ಯ ಅಧ್ಯಕ್ಷರೆ, ಲೋಕಸಭಾ ಸದಸ್ಯರು ಮತ್ತು ಮಾಜಿ ಮುಖ್ಯಮಂತ್ರಿಗಳಾದ ಕುಮಾರ ಸ್ವಾಮಿಯವರು ನಿನ್ನೆ ಪತ್ರಿಕಾ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡುವಾಗ ಹೇಳಿಕೆಯೊಂದನ್ನು ನೀಡಿದ್ದಾರೆ. ಅದು ಹಲವಾರು ಪತ್ರಿಕೆಗಳಲ್ಲಿ ಪ್ರಕಟವಾಗಿದೆ. ನಮ್ಮ ಸದನದ ಗೌರವಕ್ಕೆ ಚ್ಯುತಿ ತರುವಂತಹ ಹಾಗೂ ಬೆಚ್ಚಿ ಬೀಳುವಂತಹ ಮಾತನ್ನು ರಾಜಕೀಯ ಪಕ್ಷವೊಂದರ ನಾಯಕರು ಆಡಿರುವುದನ್ನು ನಮ್ಮ ರಾಜ್ಯದ ಜನತೆ ಗಮನಿಸಿದ್ದಾರೆ. ಮಾನ್ಯ ಲೋಕಸಭಾ ಸದಸ್ಯರು ಮತ್ತು ಜಾತ್ಯತೀತ ಜನತಾದಳದ ರಾಜ್ಯಾಧ್ಯಕ್ಷರೂ ಆಗಿರುವ ಮಾನ್ಯ ಹೆಚ್.ಡಿ. ಕುಮಾರಸ್ವಾಮಿಯವರು ಹೇಳಿಕೆಯೊಂದನ್ನು ನೀಡಿದ್ದಾರೆ. 'ವಿಧಾನ ಸಭೆಯ ಸದನವು ಹೆಂಡದ ಅಂಗಡಿಯ ರೀತಿಯಲ್ಲಿ ನಡೆಯುತ್ತಿದೆ' ಎಂದು ಅವರು ಹೇಳಿದ್ದಾರೆ. ಇದು ನಮ್ಮ ಸದನಕ್ಕೆ ಕಳಂಕ ತರುವಂತಹ ಮಾತಾಗಿದೆ. ಸದನದ ಮತ್ತು ಸದಸ್ಯರ ಗೌರವಕ್ಕೆ ಚ್ಯುತಿ ಉಂಟಾಗಿದೆ. ಆದ್ದರಿಂದ, ನಾನು ನಿಯಮ 191 ರ ಅಡಿಯಲ್ಲಿ ಈ ಹಕ್ಕು ಚ್ಯುತಿ ಸೂಚನೆಯನ್ನು ಮಂಡಿಸುತ್ತಿದ್ದೇನೆ. ಈ ಬಗ್ಗೆ ಕಾನೂನಿನ ಅಗತ್ಯ ಕ್ರಮವನ್ನು ಜರುಗಿಸಬೇಕೆಂದು ಕೋರುತ್ತೇನೆ.

(ಗೊಂದಲ)

ಶ್ರೀ ಎಸ್. ಸುರೇಶ್‌ಕುಮಾರ್ (ನಗರಾಭಿವೃದ್ಧಿ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ

ಬೆಂಗಳೂರು ಜಲಮಂಡಳಿ ಸಚಿವರು): ಮಾನ್ಯ ಅಧ್ಯಕ್ಷರೆ, ನಮ್ಮ ಸದನದ ನಡವಳಿಕೆಗಳ ನಿಯಮ 191ರಡಿ ಸನ್ಮಾನ್ಯ ಸದಸ್ಯರು ಹಕ್ಕುಚ್ಯುತಿ ವಿಷಯವೊಂದನ್ನು ಮಂಡಿಸಿದ್ದಾರೆ. ಈ ವಿಷಯ ಲೋಕಸಭಾ ಸದಸ್ಯರಿಗೆ ಸಂಬಂಧ ಪಟ್ಟಿರುವುದರಿಂದ ನಮ್ಮ ನಿಯಮಾವಳಿಗಳ ಪ್ರಕಾರ ಲೋಕಸಭಾ ಸ್ಪೀಕರ್‌ರವರಿಗೆ ಇದನ್ನು ನೀವು ಕಳುಹಿಸಬೇಕೆಂದು ಕೇಳಿಕೊಳ್ಳುತ್ತೇನೆ.

(ಗೊಂದಲ)

ಅಧ್ಯಕ್ಷರು: ಈ ಹಕ್ಕುಚ್ಯುತಿ ಸೂಚನೆಯನ್ನು ಪರಿಶೀಲಿಸಿ, ಸೂಕ್ತ ತೀರ್ಮಾನವನ್ನು ಕೈಗೊಳ್ಳುತ್ತೇನೆ.

(ಗೊಂದಲ)

ಅಧ್ಯಕ್ಷರು: ಈಗ ವಿತ್ತೀಯ ಕಾರ್ಯಕಲಾಪಗಳು.

(ಗೊಂದಲ)

5. ವಿತ್ತೀಯ ಕಾರ್ಯಕಲಾಪಗಳು:

ಅ) 2010–11ನೇ ಸಾಲಿನ ಮಧ್ಯಮಾವಧಿ ಪರಿಶೀಲನಾ ವರದಿ ಮಂಡನೆ.

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2010–11ನೇ ಸಾಲಿನ ರಾಜ್ಯ ಹಣಕಾಸಿನ ಮಧ್ಯಮಾವಧಿ ಪರಿಶೀಲನಾ ವರದಿಯನ್ನು ಮಂಡಿಸುತ್ತಿದ್ದೇನೆ.

(ಗೊಂದಲ)

ಅಧ್ಯಕ್ಷರು: ಮಂಡಿಸಲಾಯಿತು.

(ಗೊಂದಲ)

ಅಧ್ಯಕ್ಷರು: ಈಗ 2010–11ನೇ ಸಾಲಿನ ಪೂರಕ ಅಂದಾಜುಗಳ (ಎರಡನೇ ಕಂತು) ಮೇಲೆ ಚರ್ಚೆ ಉತ್ತರ ಹಾಗೂ ಮತಕ್ಕೆ ಹಾಕುವುದು.

ಆ) 2010–11ನೇ ಸಾಲಿನ ಪೂರಕ ಅಂದಾಜುಗಳು (ಎರಡನೇ ಕಂತು)

(ಗೊಂದಲ)

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, ದಿನಾಂಕ:31–03–2011 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1 ರಿಂದ 5, 7ರಿಂದ 15 ಮತ್ತು 17 ರಿಂದ 28